# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 196 (1500)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಪಶುಸಂಗೋಪನೆ ಸಚಿವರು

ವಿಷಯ : ಪಶುವೈದ್ಯಕೀಯ ವಿಶ್ವವಿದ್ಯಾಲಯದ ಬಗ್ಗೆ

(ಅ) ರಾಜ್ಯದಲ್ಲಿ ಏಕೈಕ ಪಶು ವಿಶ್ವವಿದ್ಯಾಲಯವು ಇದ್ದು ವಿಭಜನೆ ಮಾಡುವ ಯೋಚನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ವಿಭಜನೆಗೆ ಮಾಡಲು ಕಾರಣವೇನು ;

(ಆ) ಈ ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಸ್ಥಾಪನೆಯಾದಾಗಿನಿಂದ ಇಲ್ಲಿಯವರೆಗೆ ಸರ್ಕಾರದಿಂದ ಒದಗಿಸಿದ್ದ ಅನುದಾನವೆಷ್ಟು ; ಅದರಲ್ಲಿ ಖರ್ಚಾದ ಹಣ ಎಷ್ಟು ; (ವರ್ಷಾವಾರು ಮಾಹಿತಿ ನೀಡುವುದು)

(ಇ) ಈ ವಿಶ್ವವಿದ್ಯಾಲಯದಲ್ಲಿ ಒಟ್ಟಾರೆ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಸರ್ಕಾರದಿಂದ ನೇಮಕಗೊಂಡ ಸಿಬ್ಬಂದಿಗಳೆಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?